# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ [KLIDC Ltd.] ದ ಹೆಸರನ್ನು "ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ" ಎಂದು ಬದಲಿಸುವ ಬಗ್ಗೆ.

*****

**ಪ್ರಸ್ತಾವನೆ :-**

ಕರ್ನಾಟಕ ಸರ್ಕಾರವು ರಾಜ್ಯದಲ್ಲಿನ ಚರ್ಮೋದ್ಯಮದ ಬೆಳವಣಿಗೆ ಮತ್ತು ಪರಿಶಿಷ್ಟ ಜಾತಿಗೆ ಸೇರಿದ ಚರ್ಮ ಕುಶಲ ಕರ್ಮಿಗಳ ಆರ್ಥಿಕ ಮತ್ತು ಸಾಮಾಜಿಕ ಶ್ರೇಯೋಭಿವೃದ್ಧಿಯ ಮೂಲ ಉದ್ದೇಶಗಳನ್ನು ಗಮನದಲ್ಲಿಟ್ಟುಕೊಂಡು ಕರ್ನಾಟಕ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತವನ್ನು 1976ರಲ್ಲಿ ಸ್ಥಾಪಿಸಿತು. ನಿಗಮವು ಚರ್ಮೋತ್ಪನ್ನಗಳನ್ನು "ಲಿಡ್ಕರ್" ಬ್ರಾಂಡ್ ನೇಮ್ ಅಡಿ ಮಾರಾಟ ಮಾಡುತ್ತಿದೆ.

ಪ್ರಸಕ್ತ 2009-10ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ಸಂಸ್ಥೆಯನ್ನು "ಜಗಜೀವನರಾಂ ಅಭಿವೃದ್ಧಿ ನಿಗಮ ನಿಯಮಿತ" ಎಂದು ಪುನರ್ ನಾಮಕರಣ ಮಾಡಿ ಕರ್ನಾಟಕ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತವನ್ನು ಅವಲಂಬಿಸಿರುವವರಿಗೆ ತಾಂತ್ರಿಕ ಸಹಾಯ ಹಾಗೂ ಮಾರುಕಟ್ಟೆ ಅವಕಾಶವನ್ನು ಕಲ್ಪಿಸಲು ರೂ. 5.00 ಕೋಟಿ ನೀಡಲಾಗುವುದೆಂದು ಘೋಷಿಸಿದ್ದ ಹಿನ್ನೆಲೆಯಲ್ಲಿ ಕರ್ನಾಟಕ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತವನ್ನು ಪೂರ್ಣ ಪ್ರಮಾಣದಲ್ಲಿ ಪುನಃಶ್ಚೇತನಗೊಳಿಸಲು ಹಾಗೂ ಚರ್ಮ ಕುಶಲ ಕರ್ಮಿಗಳಿಗೆ ನಿರಂತರ ಉದ್ಯೋಗವನ್ನು ಒದಗಿಸಲು 2009-10ನೇ ಸಾಲಿನ ಆಯವ್ಯದಲ್ಲಿ ರೂ. 500.00 ಲಕ್ಷಗಳನ್ನು ನಿಗಧಿಪಡಿಸಲಾಗಿದೆ ಹಾಗೂ ಮುಂದುವರೆದು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಿಐ 27 ಸಪ್ರಕೈ 2009, ಬೆಂಗಳೂರು, ದಿನಾಂಕ: 20-11-2009**

**ಯೂನಿಕ್ ಕ್ರಮ ಸಂಖ್ಯೆ: 65/2009**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಕರ್ನಾಟಕ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ [KLIDC Ltd.] ದ ಹೆಸರನ್ನು **"ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ"** ಎಂದು ಬದಲಿಸಿ ತಕ್ಷಣದಿಂದ ಜಾರಿಗೆ ತರಲು ಆದೇಶಿಸಿದೆ.

ಈ ಸಂಬಂಧದಲ್ಲಿ ನಿಯಮಗಳನ್ವಯ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

"ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ" ಉತ್ಪಾದಿಸುವ ಉತ್ಪನ್ನಗಳನ್ನು **"ಲಿಡ್ಕರ್"** ಬ್ರಾಂಡ್ ನೇಮ್‌ನಲ್ಲಿಯೇ ಮಾರಾಟ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. R. Nagabhushana

[ಬಿ.ಆರ್.ನಾಗಭೂಷಣ]
ಪೀಠಾಧಿಕಾರಿ [ಸಪ್ರಕೈ],
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಗೆ :-**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವ ಸಲುವಾಗಿ.

**ಪ್ರತಿ :-**

[1] ಮಹಾಲೇಖಪಾಲರು [ಎ ಮತ್ತು ಇ], ಕರ್ನಾಟಕ, ಬೆಂಗಳೂರು-1.
[2] ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
[3] ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
[4] ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
[5] ಎಲ್ಲಾ ಜಿಲ್ಲಾಧಿಕಾರಿಗಳು.
[6] ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ [KLIDC Ltd.], ನಂ.17/5, ಓಬ್ಲಾಂಗ್ ಬ್ಲಾಕ್, ಯೂನಿಟಿ ಕಟ್ಟಡ, ಜೆ.ಸಿ.ರಸ್ತೆ, ಬೆಂಗಳೂರು-2.
[7] ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ [ವೆಚ್ಚ-1], ವಿಧಾನಸೌಧ, ಬೆಂಗಳೂರು-1.
[8] ಸರ್ಕಾರದ ಅಧೀನ ಕಾರ್ಯದರ್ಶಿ [ಸೇವೆಗಳು/ಸಮನ್ವಯ], ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು-1.
[9] ಸಚಿವ ಸಂಪುಟ ಶಾಖೆ [ಪ್ರಕರಣ ಸಂಖ್ಯೆ ಸಿ-538], ವಿಧಾನಸೌಧ, ಬೆಂಗಳೂರು.
[10] ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.